**ಕರ್ನಾಟಕ ಸರ್ಕಾರ**
**ಸಮಾಜ ಕಲ್ಯಾಣ ಇಲಾಖೆ**
# ಪರೀಕ್ಷಾ ಪೂರ್ವ ತರಬೇತಿ ಕೇಂದ್ರ

ಸಕಇ/ಪಪೂತಕೇ/ಎಸ್-6/ಸಿಆರ್-ಡ್ರೋನ್/2024-25

ಅಪರ ನಿರ್ದೇಶಕರ ಕಛೇರಿ
ಪರೀಕ್ಷಾ ಪೂರ್ವತರಬೇತಿ ಕೇಂದ್ರ,
ಡಾ|| ಬಿ.ಆರ್.ಅಂಬೇಡ್ಕರ್ ಭವನ
ವಸಂತನಗರ, ಬೆಂಗಳೂರು.
ದಿನಾಂಕ : 12-07-2024

## ಅಧಿಸೂಚನೆ

ವಿಷಯ: ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಡ್ರೋನ್ ಉಪಕರಣವನ್ನು Logistics Surveillance, Agriculture ಮತ್ತು ವಿವಿಧ ಕ್ಷೇತ್ರಗಳಲ್ಲಿ ಉಪಯೋಗಿಸುವ ಸಂಬಂಧ ಕರ್ನಾಟಕ ರಾಜ್ಯದ 04 ಕಂದಾಯ ವಿಭಾಗಗಳಲ್ಲಿ ಪ್ರತ್ಯೇಕವಾಗಿ 15 ದಿನಗಳ ವಸತಿಯುತ ತರಬೇತಿ ನೀಡುವ ಬಗ್ಗೆ.

*******

2024-25ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಡ್ರೋನ್ ಉಪಕರಣವನ್ನು Logistics Surveillance, Agriculture ಮತ್ತು ವಿವಿಧ ಕ್ಷೇತ್ರಗಳಲ್ಲಿ ಉಪಯೋಗಿಸುವ ಸಂಬಂಧ ಕರ್ನಾಟಕ ರಾಜ್ಯದ 04 ಕಂದಾಯ ವಿಭಾಗಗಳಲ್ಲಿ ಪ್ರತ್ಯೇಕವಾಗಿ 15 ದಿನಗಳ ವಸತಿಯುತ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ಡ್ರೋನ್ ಉಪಕರಣವನ್ನು ವಿವಿಧ ಕ್ಷೇತ್ರಗಳಲ್ಲಿ ಉಪಯೋಗಿಸುವ ಸಂಬಂಧ ನೀಡಲಾಗುವ ತರಬೇತಿಗೆ ಸಂಬಂಧಿಸಿದಂತೆ ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿದೆ.

| ಕ್ರ ಸಂ | ವಿವರ | |
|---|---|---|
| 01 | **ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಡ್ರೋನ್ ಉಪಕರಣವನ್ನು Logistics Surveillance, Agriculture ಮತ್ತು ವಿವಿಧ ಕ್ಷೇತ್ರಗಳಲ್ಲಿ ಉಪಯೋಗಿಸುವ ಸಂಬಂಧ ತರಬೇತಿ.** | ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಡ್ರೋನ್ ಉಪಕರಣವನ್ನು Logistics Surveillance, Agriculture ಮತ್ತು ವಿವಿಧ ಕ್ಷೇತ್ರಗಳಲ್ಲಿ ಉಪಯೋಗಿಸುವ ಸಂಬಂಧ ಕರ್ನಾಟಕ ರಾಜ್ಯದ 04 ಕಂದಾಯ ವಿಭಾಗಗಳಲ್ಲಿ ಪ್ರತ್ಯೇಕವಾಗಿ 15 ದಿನಗಳ ವಸತಿಯುತ ತರಬೇತಿ ನೀಡಲಾಗುವುದು. |
| 02 | **ವಯಸ್ಸು** | 18 ರಿಂದ 35 ವರ್ಷ |

| | | |
|---|---|---|
| 03 | **ಕೋರ್ಸ್ ಗಳ ವಿವರ** | ಡ್ರೋನ್ ಉಪಕರಣವನ್ನು Logistics Surveillance, Agriculture, ಕೈಗಾರಿಕೆಗಳಲ್ಲಿ, ಮೈನ್ಸ್, ಸ್ಟೀಲ್, ವಿದ್ಯುತ್, ವಿಡಿಯೋಗ್ರಾಫಿ ಹಾಗೂ ಇತರೆ ಕ್ಷೇತ್ರಗಳಲ್ಲಿ ಡ್ರೋನ್ ಆಪರೇಟರ್ ಆಗಿ ನಿರ್ವಹಿಸಲು. |
| 04 | **ಅಭ್ಯರ್ಥಿಯ ಸಾಮಾನ್ಯ ಅರ್ಹತೆ** | 1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು;<br>2. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗಧಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು.<br>3. ದೈಹಿಕ ಅಂಗವಿಕಲ ಮೀಸಲಾತಿಯಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿ, ನಿಗಧಿತ ಪ್ರಾಧಿಕಾರದಿಂದ ನಿಗಧಿಪಡಿಸಲಾದ ಕೊನೆಯ ದಿನಾಂಕದೊಳಗೆ ಅಂಗವಿಕಲ ಪ್ರಮಾಣ ಪತ್ರ ಪಡೆದಿರಬೇಕು.<br>4. ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಿರಬೇಕು. |
| 05 | **ವಾರ್ಷಿಕ ಆದಾಯ** | ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ.**8.00** ಲಕ್ಷ ಮೀರಿರಬಾರದು. |
| 06 | **ಆಯ್ಕೆ ವಿಧಾನ** | • ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಮೊದಲು ಅರ್ಜಿ ಸಲ್ಲಿಸದವರಿಗೆ ಪ್ರಥಮ ಆದ್ಯತೆ ನೀಡಲಾಗುವುದು. |
| 07 | **ಅರ್ಜಿ ಸಲ್ಲಿಸುವ ವೆಬ್ ಸೈಟ್ ವಿಳಾಸ** | **www.petc.kar.nic.in** |
| 08 | **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ** | **31.07.2024** |

**<u>ಗಮನದಲ್ಲಿಡಬೇಕಾದ ಅಂಶ :-</u>**

- ಇಲಾಖಾ ವೆಬ್ ಸೈಟ್ ನಲ್ಲಿ ಕಾಲಕಾಲಕ್ಕೆ ನೀಡಲಾಗುವ ಮಾಹಿತಿಯು ಅಧಿಕೃತ ಹಾಗೂ ಅಂತಿಮವಾಗಿರುತ್ತದೆ.
- ಇಲಾಖಾವತಿಯಿಂದ ಯಾವುದೇ ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದ್ದರಿಂದ, ಇಲಾಖಾ ವೆಬ್ ಸೈಟ್ ನ್ನು ಕಾಲಕಾಲಕ್ಕೆ ವೀಕ್ಷಿಸತಕ್ಕದ್ದು.
- ತಪ್ಪು ಮಾಹಿತಿಯ ಕಾರಣದಿಂದ ಉಂಟಾಗಬಹುದಾದ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.

**ಸಹಿ/-**
ಅಪರ ನಿರ್ದೇಶಕರು (ಪ್ರಭಾರ),
ಪರೀಕ್ಷಾ ಪೂರ್ವತರಬೇತಿಕೇಂದ್ರ,
ಬೆಂಗಳೂರು.